# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 887
ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 20-09-2021
ಉತ್ತರಿಸುವ ಸಚಿವರು : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಪದವಿ ಪೂರ್ವ ಕಾಲೇಜುಗಳಲ್ಲಿ ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಳೆದ ಮೂರು ಶೈಕ್ಷಣಿಕ ವರ್ಷಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳ ವಿವರ ಈ ಕೆಳಕಂಡಂತಿದೆ:<br>2018–19: 2782<br>2019–20: 2819<br>2020–21: 1835 |
| ಆ) | ಸದರಿ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಬೇಕೆನ್ನುವ ಬೇಡಿಕೆಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸದರಿ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಸರ್ಕಾರದ ಕ್ರಮಕೈಗೊಳ್ಳುವುದೇ; | ಅತಿಥಿ ಉಪನ್ಯಾಸಕರುಗಳ ನೇಮಕಾತಿಯು ತಾತ್ಕಾಲಿಕ ವ್ಯವಸ್ಥೆ ಆಗಿರುತ್ತದೆ. ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸಲು ಮಾನ್ಯ ಸರ್ವೋಚ್ಛ ನ್ಯಾಯಾಲಯದ ಉಮಾದೇವಿ ಪ್ರಕರಣದಲ್ಲಿನ ಆದೇಶದಂತೆ ಅವಕಾಶ ಇರುವುದಿಲ್ಲ. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಉಪನ್ಯಾಸಕರುಗಳ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಆಗಾಗ್ಗೆ ಭರ್ತಿ ಮಾಡಲಾಗುತ್ತಿದ್ದು, ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಕೂಡ ನೇರ ನೇಮಕಾತಿ ಮೂಲಕ ಆಯ್ಕೆಗೊಳ್ಳಲು ಅವಕಾಶವಿರುತ್ತದೆ. |
| ಇ) | ಇಲ್ಲವಾದಲ್ಲಿ, ಸದರಿ ಅತಿಥಿ ಉಪನ್ಯಾಸಕರುಗಳಿಗೆ "ಸೇವಾ ಭದ್ರತೆ' ಯನ್ನಾದರೂ ಒದಗಿಸಲು ಮುಂದಾಗುವುದೇ; | |
| ಈ) | ಸದರಿ ಅತಿಥಿ ಉಪನ್ಯಾಸಕರುಗಳ ಗೌರವಧನವನ್ನು ಹೆಚ್ಚಿಸಬೇಕೆನ್ನುವ ಬೇಡಿಕೆಯನ್ನು ಸರ್ಕಾರದ ಗಮನಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸರ್ಕಾರದ ಆದೇಶ ಸಂಖ್ಯೆ ಇಡಿ 72 ಎಸ್‌ಟಿಬಿ 2016, ದಿನಾಂಕ:04–07–2016ರಲ್ಲಿ ಮಾಹೆಯಾನ ರೂ.7,000/– ಗೌರವಧನವನ್ನು ಪಾವತಿಸಲಾಗುತ್ತಿತ್ತು. ಸರ್ಕಾರದ ಆದೇಶ ಸಂಖ್ಯೆ ಇಡಿ 79 ಡಿಜಿಡಿ 2018, ದಿನಾಂಕ:02–07–2018ರಂತೆ ಪ್ರತಿ ಮಾಹೆ ರೂ.9,000/–(ಒಂಭತ್ತು ಸಾವಿರ ಮಾತ್ರ)ಗಳ ಗೌರವಧನವನ್ನು ಮಂಜೂರು ಮಾಡಲಾಗುತ್ತಿದೆ. ಪ್ರಸ್ತುತ ಅತಿಥಿ |

| | | |
|---|---|---|
| | | ಉಪನ್ಯಾಸಕರುಗಳ ಗೌರವಧನವನ್ನು ರೂ.9,000/- ದಿಂದ ರೂ.12,000/- ಹೆಚ್ಚಿಸುವುದಕ್ಕೆ ಸಂಬಂಧಿಸಿದಂತೆ, ಕಡತವು ವ್ಯವಹರಣೆಯಲ್ಲಿದ್ದು, ಆರ್ಥಿಕ ಇಲಾಖೆಯ ಸಹಮತಿ ಪಡೆದ ನಂತರ ಕ್ರಮಕೈಗೊಳ್ಳಲಾಗುವುದು. |

**ಸಂಖ್ಯೆ: ಇಡಿ 143 ಡಿಜಿಡಬ್ಲ್ಯೂ 2021**

(ಬಿ.ಸಿ. ನಾಗೇಶ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಹಾಗೂ ಸಕಾಲ ಸಚಿವರು